ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಮಾಗಡಿ ಟೌನ್‌ನಲ್ಲಿ ನಾಡಪ್ರಭು ಕೆಂಪೇಗೌಡರ ಆಳ್ವಿಕೆ

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-

274 (306) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಾಗಡಿ ಟೌನ್‌ನಲ್ಲಿ ಕೆಂಪೇಗೌಡರ ಕಾಲದಲ್ಲಿ ನಿರ್ಮಾಣ ವಾಗಿರುವ ಕೋಟೆಯ ಒಟ್ಟು ಆಸ್ತಿ (ಜಾಗ) ಎಷ್ಟಿದೆ ;

(ಆ) ನಾಡಪ್ರಭು ಕೆಂಪೇಗೌಡರ ಅವಧಿಯಲ್ಲಿ ಮಾಗಡಿಯಲ್ಲಿ ನಿರ್ಮಿಸಲಾಗಿರುವ ಪಂಚಲಿಂಗೇಶ್ವರ ದೇವಸ್ಥಾನಗಳಾದ ಗೌರಮ್ಮನ ಕೆರೆಯ ಹತ್ತಿರದ ಪ್ರಸನ್ನ ಶ್ರೀರಾಮೇಶ್ವರಸ್ವಾಮಿ ದೇವಸ್ಥಾನ, ಕೋಟೆ ಶ್ರೀ ರಾಮೇಶ್ವರಸ್ವಾಮಿ ದೇವಸ್ಥಾನ, ಶ್ರೀ ಕಾಶಿ ವಿಶ್ವನಾಥಸ್ವಾಮಿ ದೇವಸ್ಥಾನ, ಶ್ರೀ ಗವಿಗಂಗಾಧರೇಶ್ವರಸ್ವಾಮಿ ದೇವಸ್ಥಾನ ಮತ್ತು ಶ್ರೀ ಸೋಮೇಶ್ವರಸ್ವಾಮಿ ದೇವಸ್ಥಾನದ ಒಟ್ಟು ಆಸ್ತಿಗಳ (ಜಾಗ) ಎಷ್ಟಿವೆ ;

(ಇ) ನಾಡಪ್ರಭು ಕೆಂಪೇಗೌಡರ ಕಾಲದಲ್ಲಿ ಮಾಗಡಿ ಟೌನ್ ತಿರುಮಲೆಯಲ್ಲಿ ನಿರ್ಮಿಸಿರುವ ಶ್ರೀ ರಂಗನಾಥಸ್ವಾಮಿ ದೇವಸ್ಥಾನದ ಒಟ್ಟು ಆಸ್ತಿ (ಜಾಗ) ಎಷ್ಟಿದೆ ; ದೇವಸ್ಥಾನದ ಆಸ್ತಿ ಒತ್ತುವರಿಯಾಗಿದ್ದು ,ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು;

(ಈ) ನಾಡಪ್ರಭು ಕೆಂಪೇಗೌಡ ಕಾಲದಲ್ಲಿ ಮಾಗಡಿ ಟೌನ್ ತಿರುಮಲೆಯಲ್ಲಿ ನಿರ್ಮಿಸಿರುವ ಶ್ರೀಯೋಗ ನರಸಿಂಹಸ್ವಾಮಿ ದೇವಸ್ಥಾನದ ಒಟ್ಟು ಆಸ್ತಿ ಎಷ್ಟಿದೆ (ಜಾಗ) ; ದೇವಸ್ಥಾನದ ಆಸ್ತಿ ಒತ್ತುವರಿಯಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?